# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 606 |
| **ಸದಸ್ಯರ ಹೆಸರು** | : | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : | 13-12-2024 |
| **ಉತ್ತರಿಸುವವರು** | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ "ಗೃಹಲಕ್ಷ್ಮಿ" ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು? | ಗೃಹಲಕ್ಷ್ಮಿ ಯೋಜನೆಯಡಿ ಸೆಪ್ಟೆಂಬರ್-2024ರ ಅಂತ್ಯಕ್ಕೆ ಕಲಬುರಗಿ ಜಿಲ್ಲೆಯಲ್ಲಿ 5,63,960 ಫಲಾನುಭವಿಗಳು ಮತ್ತು ಯಾದಗಿರಿ ಜಿಲ್ಲೆಯಲ್ಲಿ 2,54,649 ಫಲಾನುಭವಿಗಳು ನೋಂದಣಿಯಾಗಿರುತ್ತಾರೆ. |
| ಆ) | ಈ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಪ್ರತಿ ತಿಂಗಳು ಸಕಾಲಕ್ಕೆ ಎರಡು ಸಾವಿರ ರೂ.ಗಳನ್ನು ಜಮೆ ಮಾಡಲಾಗುತ್ತಿದೆಯೇ; | ಹೌದು. ಗೃಹಲಕ್ಷ್ಮಿ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಆಗಸ್ಟ್-2023ರ ಮಾಹೆಯಿಂದ ಸೆಪ್ಟೆಂಬರ್-2024ರ ಮಾಹೆವರೆಗಿನ ಧನಸಹಾಯವನ್ನು DBT ಮೂಲಕ ಪಾವತಿಸಲಾಗಿದೆ. |
| ಇ) | ಸದರಿ ಜಿಲ್ಲೆಗಳಲ್ಲಿರುವ "ಗೃಹಲಕ್ಷ್ಮಿ" ಯೋಜನೆಯ ಫಲಾನುಭವಿಗಳಿಗೆ ಒಂದು ತಿಂಗಳಿಗೆ ಎಷ್ಟು ಅನುದಾನ ನೀಡಲಾಗುತ್ತದೆ; ಈ ಅನುದಾನವನ್ನು ಯಾವ ಮೂಲದಿಂದ ಭರಿಸಲಾಗುತ್ತಿದೆ? (ವಿವರ ನೀಡುವುದು) | • ಗೃಹಲಕ್ಷ್ಮಿ ಯೋಜನೆಯಡಿ ನೋಂದಣಿಗೆ ಅಂತಿಮ ದಿನಾಂಕ ಇಲ್ಲದಿರುವುದರಿಂದ ನೋಂದಣಿ ಪ್ರಕ್ರಿಯೆಯು ನಿರಂತರವಾಗಿರುತ್ತದೆ. ಪ್ರತಿ ತಿಂಗಳ ಅಂತ್ಯಕ್ಕೆ ನೋಂದಣಿಯಾದ ಫಲಾನುಭವಿಗಳಿಗೆ ಅನುಗುಣವಾಗಿ ತಲಾ ರೂ. 2000/- ಗಳಂತೆ ವೆಚ್ಚ ಭರಿಸಲಾಗುತ್ತಿದೆ.<br>• ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನೋಂದಣಿಯಾಗಿರುವ ಅರ್ಹ ಫಲಾನುಭವಿಗಳಿಗೆ ಸೆಪ್ಟೆಂಬರ್-2024ರ ಮಾಹೆಗೆ ಈ ಕೆಳಕಂಡಂತೆ ವೆಚ್ಚ ಭರಿಸಲಾಗಿದೆ.<br>**ಜಿಲ್ಲೆ** — **ಪಾವತಿಸಲಾದ ಮೊತ್ತ (ರೂ. ಲಕ್ಷಗಳಲ್ಲಿ)**<br>ಕಲಬುರಗಿ — 10987.06<br>ಯಾದಗಿರಿ — 4944.92<br>• ಪ್ರತಿ ಮಾಹೆ ನೋಂದಣಿಯಾದ ಫಲಾನುಭವಿಗಳ ಆಧಾರದ ಮೇಲೆ 2024-25ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಿರುವ ಅನುದಾನದಿಂದ ವೆಚ್ಚ ಭರಿಸಲಾಗುತ್ತಿದೆ. |

**ಸಂಖ್ಯೆ:** ಮಮಇ 237 ಮಮಅ 2024

**(ಲಕ್ಷ್ಮೀ ಆರ್.ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು